ದಿನಾಂಕ 20-02-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರವಾಗಿ ಮೇಡಮ್ ಎ.ಎಸ್. ವಕೀಲರವರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರ ಸಂಖ್ಯೆ 1(ಬಿ) ಆಗಿರುತ್ತೇನೆ. ನಾನು ಸಹಿ ಮಾಡಿರುವ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ನನ್ನ ಹೇಳಿಕೆಯ ಮೇರೆಗೆ ತಯಾರಿಸಲಾಗಿದೆ ಮತ್ತು ಅದರಲ್ಲಿರುವ ವಿಷಯಗಳು ಸರಿ ಇವೆ.

ದೂರಿನ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು, ಪ್ರ.ವ.ವ., ಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು, ಸ್ಥಳ ಪಂಚನಾಮೆಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು, ಸ್ಥಳದ ಕಚ್ಚಾ ನಕ್ಷೆಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು, ಗಾಯದ ಪ್ರಮಾಣ ಪತ್ರದ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು, ಐಎಂವಿ ವರದಿಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.6 ಎಂದು, ಎ.ಐ.ಆರ್. ರಿಜಿಸ್ಟರ್ ನ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ. 7 ಎಂದು, ಅಂತಿಮ ವರದಿಯ ಯಥಾ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.8 ಎಂದು, ಗುಡ್ಮೆ ಉಸ್ಮಾನ್ ರವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.9 ಎಂದು, ಬ್ಯಾಂಕ್ ಆಫ್ ಇಂಡಿಯಾದ 2 ಪಾಸ್ ಬುಕ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.10 ಮತ್ತು ನಿಪಿ.11 ಎಂದು, 126 ಬಿಲ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.12 ಎಂದು, ದಿನಾಂಕ 11.03.2022 ರ ಒಳರೋಗಿ ಬಿಲ್ ನ ಮೂಲ ಪ್ರತಿಯನ್ನು ವಿಮಾ ಕಂಪೆನಿಗೆ ಹಾಜರುಪಡಿಸಿರುತ್ತೇನೆ, ಆದ್ದರಿಂದ ಅದರ ಡೂಪ್ಲಿಕೇಟ್ ಪ್ರತಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ.13 ಎಂದು, ಆಸ್ಪತ್ರೆಯ ಬಿಡುಗಡೆ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.14 ಎಂದು, ಸಿ.ಟಿ. ಸ್ಕ್ಯಾನ್ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.15 ಎಂದು, 6 ಮುಂಗಡ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.16 ಎಂದು, ಹೋಮ್ ಪೇಸೆಂಟ್ ಕೇರ್ ರವರು ನೀಡಿರುವ 2 ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.17 ಮತ್ತು ನಿಪಿ.18 ಎಂದು, ಬೀಚ್ ಹೀಲಿಂಗ್ ಹೋಮ್ ರವರು ನೀಡಿರುವ 10 ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.19

ಎಂದು, 2 ಫೋಟೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.20 ಎಂದು, ನಿಪಿ.20 ಕ್ಕೆ ಸಂಬಂಧಿಸಿದಂತೆ ಸಿಡಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.20(ಎ) ಎಂದು, ನಿಪಿ.20 ಮತ್ತು ನಿಪಿ.20(ಎ) ಗೆ ಸಂಬಂಧಿಸಿದಂತೆ ಸಾಧನ ಡಿಜಿಟಲ್ ರವರು ನೀಡಿರುವ ಬಿಲ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ.21 ಎಂದು, ಗುರ್ತಿಸಲಾಯಿತು. 3 ಆಧಾರ್ ಕಾರ್ಡ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.22 ರಿಂದ ನಿಪಿ.24 ಎಂದು ಗುರ್ತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲುಃ 2 ನೇ ಎದುರುದಾರರ ಪರ ಗೌರವಾನ್ವಿತ ವಕೀಲರು ಸಮಯ ಕೋರಿದ್ದು ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು. )

ಓ.ಹೇ.ಕೇ.ಸ.ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ.. ಮತ್ತು ಎ.ಸಿ.ಜೆ.ಎಂ. ಉಡುಪಿ.